ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.

ಸಂಖ್ಯೆ:ಎಕ್ಸ್1/ಡ್ರಾ.ಗ್ರೇ.ಪ/ಪ.ಕಾ.ನಿ/09/2022-23 ದಿನಾಂಕ: 26/09/2022

-: ಸುತ್ತೋಲೆ :-

ವಿಷಯ: ನವೆಂಬರ್-2022ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಅಧಿಸೂಚನೆ ಸಂಖ್ಯೆ: ಎಕ್ಸ್1/ಡ್ರಾ.ಗ್ರೇ.ಪ/ಪ.ಕಾ.ನಿ/09/2022-23, ದಿನಾಂಕ: 12/08/2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅಧಿಸೂಚನೆಯನ್ವಯ ನವೆಂಬರ್-2022ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸಲು ದಿನಾಂಕ: 25/08/2022 ರಿಂದ 25/09/2022ರ ವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಆದರೆ ರಾಜ್ಯದ ಕೆಲವು ಪರೀಕ್ಷಾ ಕೇಂದ್ರಗಳಿಂದ ಹಾಗೂ ಪೋಷಕರಿಂದ ಮಂಡಳಿಗೆ ಆನ್‌ಲೈನ್ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ ಆನ್‌ಲೈನ್ ಅರ್ಜಿಗಳನ್ನು ನೋಂದಾಯಿಸುವ ಹಾಗೂ ಪ್ರಸ್ತಾವನೆಯನ್ನು ಸಲ್ಲಿಸುವ ದಿನಾಂಕಗಳನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

ಕ್ರ ಸಂ	ವಿವರ	ಈಗಾಗಲೇ ನಿಗಧಿಪಡಿಸಿರುವ ದಿನಾಂಕ	ವಿಸ್ತರಣೆ ಮಾಡಿದ ದಿನಾಂಕ
1.	ಮಂಡಳಿ ಜಾಲತಾಣದ Center Login ಮೂಲಕ ಅಭ್ಯರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಅಂತಿಮ ದಿನಾಂಕ**	25/09/2022	28/09/2022
2.	ಮಂಡಳಿ ಜಾಲತಾಣದಲ್ಲಿ ಸಂಬಂಧಿಸಿದ Center Login ಮೂಲಕ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಆನ್‌ಲೈನ್ (Debit Card/Credit Card/Net Banking)ಮೂಲಕ ಪಾವತಿಸುವುದು.	26/09/2022ರಿಂದ 30/09/2022ರವರೆಗೆ	29/09/2022 ರಿಂದ 03/10/2022 ರವರೆಗೆ

ಉಳಿದಂತೆ ದಿನಾಂಕ: 12/08/2022ರ ಅಧಿಸೂಚನೆಯಲ್ಲಿ ನಿಗಧಿಪಡಿಸಿರುವ ದಿನಾಂಕಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. ಆದುದರಿಂದ ಮೇಲೆ ನಿಗಧಿಪಡಿಸಿರುವ ದಿನಾಂಕಗಳನ್ವಯ ವಿದ್ಯಾರ್ಥಿಗಳಿಂದ ಶುಲ್ಕ ಸ್ವೀಕರಿಸಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ನೋಂದಣಿ ಮಾಡಲು ಹಾಗೂ ಶುಲ್ಕ ಸ್ವೀಕರಿಸಲು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಡ್ರಾಯಿಂಗ್ ಗ್ರೇಡ್ ಪರೀಕ್ಷಾ ಕೇಂದ್ರದ ಮುಖ್ಯಸ್ಥರ ಗಮನಕ್ಕೆ ತಂದು, ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಡಯಟ್ ಪ್ರಾಂಶುಪಾಲರುರವರು ಅಗತ್ಯ ಕ್ರಮಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

(ಮಾನ್ಯ ನಿರ್ದೇಶಕರ ಆದೇಶಾನುಸಾರ)

ಹಿರಿಯ ಸಹಾಯಕ ನಿರ್ದೇಶಕರು
ಇತರೆ ಪರೀಕ್ಷೆಗಳು

ಪ್ರತಿಯನ್ನು:-

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಮಾಹಿತಿಗಾಗಿ.
3. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ.

4. ವಿಭಾಗೀಯ ಸಹನಿರ್ದೇಶಕರು ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗದವರಿಗೆ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
6. ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ, ಸೂಕ್ತ ಕ್ರಮಕ್ಕಾಗಿ.
7. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ.
8. ಕೇಂದ್ರಗಳ ಎಲ್ಲಾ ಮುಖ್ಯ ಅಧೀಕ್ಷಕರಿಗೆ, ಸೂಕ್ತ ಕ್ರಮಕ್ಕಾಗಿ.
9. ಹಿರಿಯ ಸಹಾಯಕ ನಿರ್ದೇಶಕರು (ಚಿತ್ರಕಲೆ) ಆಯುಕ್ತರ ಕಛೇರಿ, ಬೆಂಗಳೂರು, ವಿಭಾಗೀಯ ಆಯುಕ್ತರ ಕಛೇರಿ, ಧಾರವಾಡ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
10. ವಿಭಾಗೀಯ ಹಿರಿಯ ಚಿತ್ರಕಲಾ ವಿಷಯ ಪರಿವೀಕ್ಷಕರು ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ ರವರಿಗೆ ಅಗತ್ಯ ಕ್ರಮಕ್ಕಾಗಿ.
11. ಶಾಖಾಧಿಕಾರಿಗಳು, ಗಣಕ ಶಾಖೆ.